**Akashvani: Bangalore**
**Regional Bulletin In Kannada**
**05.03.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.03.2026: 14.30hrs**

*********

**ಮುಖ್ಯಾಂಶಗಳು :**

1. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಯಡೂರು ಕ್ಷೇತ್ರಕ್ಕೆ ಭೇಟಿ; ವೀರಭದ್ರೇಶ್ವರ ದೇವಾಲಯದ ರಾಜಗೋಪುರ ಉದ್ಘಾಟನೆ ಹಾಗೂ ಮಹಾ ಕುಂಭಾಭಿಷೇಕ ಕಾರ್ಯಕ್ರಮಗಳಲ್ಲಿ ಭಾಗಿ
2. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾಡಾನೆ ಹಾವಳಿ ತಡೆಗಟ್ಟಲು ಕಾರ್ಯಪಡೆ; ಸರ್ಕಾರದ ಆದೇಶ
3. ರಾಜ್ಯದ ವಿವಿಧ ಸ್ಥಳಗಳಲ್ಲಿಂದು ಲೋಕಾಯುಕ್ತ ದಾಳಿ; ಅಧಿಕಾರಿಗಳ ನಿವಾಸಗಳಲ್ಲಿ ದಾಖಲೆ ಪತ್ರ ಪರಿಶೀಲನೆ
4. ಕಲಬುರಗಿ ಐಟಿಎಫ್ ಮಹಿಳಾ ಟೆನಿಸ್; ಇಂದಿನ ಹಣಾಹಣಿಯಲ್ಲಿ ಭಾರತದ ಅಂಕಿತಾ ರೈನಾ, ಜೀಲ್ ದೇಸಾಯಿ ಮತ್ತು ವೈಷ್ಣವಿ ಅಡ್ಕರ್

**********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಯಡೂರು ಕ್ಷೇತ್ರದಲ್ಲಿಂದು ವೀರಭದ್ರೇಶ್ವರ ದೇವಾಲಯದ ರಾಜಗೋಪುರ ಉದ್ಘಾಟನೆ ಹಾಗೂ ಮಹಾ ಕುಂಭಾಭಿಷೇಕ ನೆರವೇರಿಸಿದರು. ನಂತರ ಮಾತನಾಡಿದ ಅವರು, ಭಾರತ ಆಧ್ಯಾತ್ಮಿಕ ಪರಂಪರೆಯ ನೆಲೆಯಾಗಿದೆ; ವೇದಗಳ ಜ್ಞಾನವನ್ನು ವಿಸ್ತರಿಸಿದ ಭೂಮಿ ನಮ್ಮದಾಗಿದೆ. ಭಗವದ್ಗೀತೆಯ ಸಂದೇಶ ನಮ್ಮನ್ನು ಧೈರ್ಯದಿಂದ ವರ್ತಿಸುವಂತೆ ಮತ್ತು ನಂಬಿಕೆಗೆ ಶರಣಾಗಲು ಪ್ರೇರಣೆಯಾಗಿದೆ ಎಂದು ಹೇಳಿದರು.

*****ಧ್ವನಿ****ಸಿ.ಪಿ.ರಾಧಾಕೃಷ್ಣನ್

ಹಿಂದೂ ಧರ್ಮ, ಇಡೀ ಭೂಮಿಯೇ ಒಂದು ಕುಟುಂಬ ಎನ್ನುವ ವಸುದೇವ ಕುಟುಂಬಕಂ ಪ್ರಜ್ಞೆ ಮೂಡಿಸಿದೆ. ಎಲ್ಲರನ್ನೂ ಪ್ರೀತಿಸುವ ಮತ್ತು ಆರಾಧಿಸುವ ಮಾನವೀಯತೆ ನಮ್ಮಲ್ಲಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಿಳಿಸಿದರು. ಈ ಸಂದರ್ಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಡಾ. ಚನ್ನಸಿದ್ಧ ಶಿವಾಚಾರ್ಯ ಸ್ವಾಮೀಜಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಪ್ರಕಾಶ ಹುಕ್ಕೇರಿ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

**********

ಕಿರಾಣಾ ಘರಾಣಾದ ಸುರ ಸಾಮ್ರಾಜ್ಞಿ ಡಾ. ಗಂಗೂಬಾಯಿ ಹಾನಗಲ್ ಅವರ ಜಯಂತಿ ಸಂದರ್ಭದಲ್ಲಿಂದು ಅವರ ಸಂಗೀತ ಸೇವೆ ಸ್ಮರಿಸಿ, ಗೌರವ ನಮನ ಸಲ್ಲಿಸಲಾಗುತ್ತಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಡಾ. ಗಂಗೂಬಾಯಿ ಅವರು, ಕಿರಾಣಾ ಘರಾಣಾ ಸಂಗೀತ ಪ್ರಕಾರಕ್ಕೆ ವಿಶ್ವಖ್ಯಾತಿಯನ್ನು ತಂದುಕೊಟ್ಟ ಗಾನ ವಿದುಷಿ; ಹುಬ್ಬಳ್ಳಿ-ಧಾರವಾಡ, ಸಂಗೀತ ಕಾಶಿ ಎಂದು ಹೆಸರುವಾಸಿಯಾಗಲು ಕೊಡುಗೆ ನೀಡಿದ ಮಹಾನ್ ಸಂಗೀತ ಶಿರೋಮಣಿ; ಅವರ ಜನ್ಮದಿನದಂದು ಗೌರವಪೂರ್ವಕ ನಮನಗಳು ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಪದ್ಮವಿಭೂಷಣ ಪುರಸ್ಕೃತ ಗಾನ ಕೋಗಿಲೆ ಡಾ. ಗಂಗೂಬಾಯಿ ಹಾನಗಲ್, ಕಠಿಣ ಪರಿಶ್ರಮ ಮತ್ತು ಅಪ್ರತಿಮ ಪ್ರತಿಭೆಯ ಮೂಲಕ ಜಗತ್ತಿನಾದ್ಯಂತ ಕನ್ನಡ ನಾಡಿನ ಕೀರ್ತಿ ಪತಾಕೆ ಹಾರಿಸಿದ ಅಪ್ರತಿಮ ಸಾಧಕಿ ಅವರು ನಮ್ಮೆಲ್ಲರಿಗೂ ಸದಾ ಸ್ಫೂರ್ತಿಯಾಗಿದ್ದಾರೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಭಾರತೀಯ ಶಾಸ್ತ್ರೀಯ ಸಂಗೀತದ ಇತಿಹಾಸದಲ್ಲಿ 'ಕಂಚಿನ ಕಂಠದ ಕೋಗಿಲೆ' ಎಂದೇ ಚಿರಸ್ಥಾಯಿಯಾಗಿರುವ ಡಾ. ಗಂಗೂಬಾಯಿ ಹಾನಗಲ್ ಅವರ ಆಲಾಪ ವಿಸ್ತಾರಗಳು, ಲಯಗಾರಿಕೆ ಮತ್ತು ಬಿಗುವಾದ ಗಮಕಗಳು ಇಂದಿಗೂ ಸಂಗೀತಾಸಕ್ತರ ಪಾಲಿಗೆ ಒಂದು ಅದ್ಭುತ ಅನುಭವ ನೀಡುತ್ತವೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

**********

ಹೀಮೋಫಿಲಿಯಾ ರೋಗಿಗಳ ಬದುಕಿನಲ್ಲಿ ಹೊಸ ಭರವಸೆ ಮೂಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಅತ್ಯಾಧುನಿಕ 'ನಾನ್ ಫ್ಯಾಕ್ಟರ್ ಥೆರಪಿ' ಜಾರಿಗೆ ಬಂದಿದ್ದು, ಇದರಿಂದ ರೋಗಿಗಳಲ್ಲಿ ರಕ್ತಸ್ರಾವದ ಪ್ರಮಾಣವನ್ನು ಸಂಪೂರ್ಣವಾಗಿ ತಡೆಗಟ್ಟಲು ಸಾಧ್ಯವಿದೆ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಹೀಮೋಫಿಲಿಯಾ ತಜ್ಞ ಡಾ. ಸುರೇಶ್ ಹನಗವಾಡಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಈ ಹಿಂದೆ ಕೇವಲ ಆಯ್ದ ಕೇಂದ್ರಗಳಿಗೆ ಸೀಮಿತವಾಗಿದ್ದ 'ರೀಬ್ಯಾಲೆನ್ಸಿಂಗ್ ಏಜೆಂಟ್' ಅಥವಾ ನಾನ್ ಫ್ಯಾಕ್ಟರ್ ಥೆರಪಿ ಚಿಕಿತ್ಸೆಯು ಈಗ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲೂ ಲಭ್ಯವಾಗುವಂತೆ ಮಾಡಲಾಗಿದೆ. ಹೀಮೋಫಿಲಿಯಾ ಪೀಡಿತರಲ್ಲಿ ಕೇವಲ ರಕ್ತ ಹೆಪ್ಪುಗಟ್ಟುವ 'ಪ್ರೋಟೀನ್' ಕೊರತೆ ಇರುತ್ತದೆಯೇ ಹೊರತು, ಅವರ ಬುದ್ಧಿವಂತಿಕೆ, ಜೀನ್ ಅಥವಾ ಯಾವುದೇ ಕೌಶಲಗಳಲ್ಲಿ ಕೊರತೆಯಿರುವುದಿಲ್ಲ ಎಂದರು.

**********

ಲೋಕಾಯುಕ್ತ ಅಧಿಕಾರಿಗಳು ರಾಜ್ಯದ ವಿವಿಧೆಡೆ ಇಂದು ಸರ್ಕಾರಿ ಅಧಿಕಾರಿಗಳ ನಿವಾಸಗಳ ಮೇಲೆ ದಾಳಿ ನಡೆಸಿ, ಅಧಿಕೃತ ಆದಾಯಕ್ಕೂ ಮೀರಿದ ಆಸ್ತಿ - ಸಂಪತ್ತು ಹೊಂದಿದ ದಾಖಲೆಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಸುತ್ತಿದ್ದಾರೆ. ಮೈಸೂರಿನಲ್ಲಿಂದು ಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು, ಕರ್ನಾಟಕ ನಗರ ನೀರು ಸರಬರಾಜು ಮತ್ತು ನೈರ್ಮಲೀಕರಣ ಇಲಾಖೆಯ ಅಧಿಕಾರಿಗೆ ಸಂಬಂಧಿಸಿದ ವಿವಿಧ ಸ್ಥಳಗಳಲ್ಲಿ ಕಾರ್ಯಾಚರಣೆ ಮಾಡುತ್ತಿದ್ದಾರೆ. ಲೋಕಾಯುಕ್ತ ಎಸ್‌ಪಿ ಟಿ.ಜೆ. ಉದೇಶ್ ಅವರ ನೇತೃತ್ವದ ತಂಡವು ಈ ಕಾರ್ಯಾಚರಣೆಯನ್ನು ಕೈಗೊಂಡಿದೆ. ಭ್ರಷ್ಟಾಚಾರ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಅಧಿಕಾರಿ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದರು. ಬೆಂಗಳೂರು ಹಾಗೂ ಬಾಗಲಕೋಟೆ ಸೇರಿ ಹಲವು ಕಡೆಗಳಲ್ಲಿ ಈ ಶೋಧ ಕಾರ್ಯಾಚರಣೆ ನಡೆಯಿತು. ಬಾಗಲಕೋಟೆ ಲೋಕಾಯುಕ್ತ ಎಸ್‌ಪಿ ಮಾನಿಂಗ್ ನಂದಗಾವಿ ಅವರ ಮಾರ್ಗದರ್ಶನದಲ್ಲಿ, ಡಿವೈಎಸ್‌ಪಿ ಸುರೇಶ್ ರೆಡ್ಡಿ ನೇತೃತ್ವದಲ್ಲಿ ಅಧಿಕಾರಿಗಳ ತಂಡ ದಾಳಿ ನಡೆಸಿದ್ದು, ಬೆಂಗಳೂರು ನಗರ ಲೋಕಾಯುಕ್ತ ಠಾಣೆಯಲ್ಲಿ ದಾಖಲಾಗಿದ್ದ ದೂರಿನ ಆಧಾರದಲ್ಲಿ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ.ವಿಜಯಪುರ ಜಿಲ್ಲೆಯ ಇಂಡಿ ಪಟ್ಟಣದಲ್ಲಿ ಕೆಬಿಜೆಎನ್‌ಎಲ್ ಅಧಿಕಾರಿಯೊಬ್ಬರ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ, ಬೀದರ ಜಿಲ್ಲೆಯ ಭಾಲ್ಕಿ, ಇಂಡಿ ಕಚೇರಿ

ಸೇರಿದಂತೆ ಹಲವೆಡೆ ಶೋಧ ಕಾರ್ಯ ಮುಂದುವರಿಸಿದ್ದಾರೆ. ಬಿಜಾಪುರ ಲೋಕಾಯುಕ್ತ ಎಸ್‌ಪಿ ಮಲ್ಲೇಶ್ ಮಾರ್ಗದರ್ಶನದಲ್ಲಿ ಡಿಎಸ್‌ಪಿ ಮಲ್ಲಿಕಾರ್ಜುನ ತುಳಸಿಗೇರಿ ನೇತೃತ್ವದಲ್ಲಿ ದಾಳಿ ನಡೆದಿದೆ.ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಯೊಬ್ಬರ ಮನೆ ಹಾಗೂ ಶಿರಹಟ್ಟಿ ತಾಲೂಕ ಕಚೇರಿ ಮೇಲೆ ಲೋಕಾಯುಕ್ತ ದಾಳಿ ನಡೆದಿದೆ. ಧಾರವಾಡ ಲೋಕಾಯುಕ್ತ ಎಸ್ಪಿ ಸಿದ್ಧಲಿಂಗಪ್ಪ ಅವರ ಮಾರ್ಗದರ್ಶನದಲ್ಲಿ ಗದಗ ಲೋಕಾಯುಕ್ತ ಡಿವೈಎಸ್ಪಿ ವಿಜಯ್ ಬಿರಾದಾರ್, ಪಿಎಸ್‌ಐ ಮಹಾಂತೇಶ ಕವಟಗಿ ನೇತೃತ್ವದಲ್ಲಿ ಈ ದಾಳಿ ನಡೆದಿದೆ.

**********

ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿ ಕಾರ್ಮಿಕರು ನಿರ್ವಹಿಸಬೇಕಾದ ಕೆಲಸವನ್ನು ಜೆಸಿಬಿ ಮೂಲಕ ಮಾಡಲಾಗುತ್ತಿತ್ತು. ಭ್ರಷ್ಟಾಚಾರ ತಡೆಯಲು ಕೇಂದ್ರ ಸರ್ಕಾರ ವಿಕಸಿತ ಭಾರತ ಜಿ.ರಾಮ್ ಜಿ. ಯೋಜನೆ ಜಾರಿಗೊಳಿಸಿದೆ ಎಂದು ಉಡುಪಿ ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಕವಲಕ್ಕಿಯಲ್ಲಿಂದು ನಡೆದ ವಿ.ಬಿ.ಜಿ.ರಾಮ್ ಜಿ. ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಿ.ಬಿ.ಜಿ.ರಾಮ್ ಜಿ. ಯೋಜನೆಯಡಿ ೧೦೦ ದಿನಗಳ ಬದಲು ೧೨೫ ದಿನಗಳ ಉದ್ಯೋಗ ನೀಡಲಾಗುವುದು. ಒಂದು ವಾರದೊಳಗೆ ಕೂಲಿ ಹಣ ಪಾವತಿಸಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು. ಕುಮಟಾ ಕ್ಷೇತ್ರದ ಶಾಸಕ ದಿನಕರ ಶೆಟ್ಟಿ ಮಾತನಾಡಿ, ವಿರೋಧ ಪಕ್ಷಗಳು ವಿ.ಬಿ.ಜಿ.ರಾಮ್ ಜಿ. ಯೋಜನೆ ಬಗ್ಗೆ ಸಾರ್ವಜನಿಕರಲ್ಲಿ ತಪ್ಪು ವಿಚಾರ ಹರಡುತ್ತಿದೆ ಎಂದು ಆರೋಪಿಸಿದರು.

**********

ಐತಿಹಾಸಿಕ ಬೆಂಗಳೂರು ಕರಗ ಮಹೋತ್ಸವ ಅಂಗವಾಗಿ ಧರ್ಮರಾಯಸ್ವಾಮಿ ದೇವಸ್ಥಾನದ ಪೂರ್ವ ಸಿದ್ಧತೆಗಳ ಬಗ್ಗೆ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ನೇತೃತ್ವದಲ್ಲಿಂದು ದೇವಸ್ಥಾನದ ಸುತ್ತಲಿನ ಸ್ಥಳ ಪರಿಶೀಲನೆ ನಡೆಯಿತು. ಆಯುಕ್ತರು, ದೇವಸ್ಥಾನ ಆಡಳಿತ ಮಂಡಳಿಯವರೊಂದಿಗೆ ಹಾಗೂ ಸಂಬಂಧಪಟ್ಟ ನಗರ ಪಾಲಿಕೆಯ ಅಧಿಕಾರಿಗಳೊಂದಿಗೆ

ಸ್ಥಳ ಪರಿಶೀಲನೆ ನಡೆಸಿದರು. ಬೆಂಗಳೂರು ಕೇಂದ್ರ ನಗರ ಪಾಲಿಕೆಯ ವತಿಯಿಂದ ಕೈಗೊಳ್ಳಬೇಕಾದ, ಕರಗ ಹಾದು ಹೋಗುವ ಸ್ಥಳಗಳಲ್ಲಿ ರಸ್ತೆ ದುರಸ್ಥಿ, ಒಳಚರಂಡಿಗಳ ಮ್ಯಾನ್ ಹೋಲ್ ಗಳ ದುರಸ್ಥಿ, ರಸ್ತೆ ಗುಂಡಿ ಮುಚ್ಚುವುದು ಇನ್ನಿತರೆ ಅಗತ್ಯ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**********

ಕಲಬುರಗಿಯಲ್ಲಿ ನಡೆಯುತ್ತಿರುವ ಐಟಿಎಫ್ ಮಹಿಳಾ ಡಬ್ಲ್ಯೂ-೩೫ ಟೆನಿಸ್ ಟೂರ್ನಿಯ ೨ನೇ ಸುತ್ತಿನ ಪಂದ್ಯದಲ್ಲಿ ಭಾರತದ ಅಂಕಿತಾ ರೈನಾ, ಉಜ್ಬೇಕಿಸ್ತಾನದ ಮಿಲಾನಾ ಮಸ್ಲೆಂಕೊವಾ ವಿರುದ್ಧ ಸೆಣಸಾಟ ನಡೆಸಲಿದ್ದಾರೆ. ಇದೇ ಸುತ್ತಿನ ಪ್ರತ್ಯೇಕ ಪಂದ್ಯಗಳಲ್ಲಿ ಭಾರತದ ಜೀಲ್ ದೇಸಾಯಿ ಮತ್ತು ವೈಷ್ಣವಿ ಅಡ್ಕರ್ ಕಣಕ್ಕಿಳಿಯುತ್ತಿದ್ದಾರೆ. ಈ ಸುತ್ತಿನಲ್ಲಿ ಗೆಲುವು ಸಾಧಿಸುವವರು ಕ್ವಾರ್ಟರ್ ಫೈನಲ್ ಪ್ರವೇಶಿಸಲಿದ್ದಾರೆ.

*****END*****